**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** ಶ್ರೀಮತಿ ಶಿವಮ್ಮ, ಹಿಂದಿನ ಅಧ್ಯಕ್ಷರು, ಹೆಚ್. ಬಸವಪುರಗ್ರಾಮ ಪಂಚಾಯಿತಿ, ಮಳವಳ್ಳಿ ತಾಲ್ಲೂಕು, ಮಂಡ್ಯಜಿಲ್ಲೆಇವರ ವಿರುದ್ಧಕರ್ನಾಟಕಗ್ರಾಮ ಸ್ವರಾಜ್ ಮತ್ತು ಪಂಚಾಯತ್‌ರಾಜ್‌ಅಧಿನಿಯಮ 1993 ರ ಪ್ರಕರಣ 43(ಎ)(vi)ರನ್ವಯಕ್ರಮ ಕೈಗೊಳ್ಳುವ ಬಗ್ಗೆ.

**ಓದಲಾಗಿದೆ:**

1. ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಮಂಡ್ಯಜಿಲ್ಲೆಇವರ ಪತ್ರ ಸಂಖ್ಯೆ:ಉಕಾ2:ಸಿ3:ಸಿಆರ್:22/19-19, ದಿನಾಂಕ:06.02.2019.
2. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 1135 ಗ್ರಾಪಂಅ 2018, ದಿನಾಂಕ:02.02.2019.
3. ಸರ್ಕಾರದ ಪತ್ರ ಸಂಖ್ಯೆ: ಗ್ರಾಅಪ203ಗ್ರಾಪಂಅ 2019, ದಿನಾಂಕ:30.03.2019.
4. ಪ್ರಾದೇಶಿಕ ಆಯುಕ್ತರು, ಮೈಸೂರು ವಿಭಾಗ, ಮೈಸೂರು ಇವರ ಪತ್ರ ಸಂಖ್ಯೆ:ಚುನಾವಣೆ ಸಿಆರ್ 06/18-19, ದಿನಾಂಕ:16.04.2020.
5. ಸರ್ಕಾರದ ಎರಡನೇ ಕಾರಣ ಕೇಳುವ ನೋಟೀಸ್ ಸಂಖ್ಯೆ: ಗ್ರಾಅಪ 398ಗ್ರಾಪಂಅ 2020, ದಿನಾಂಕ:16.05.2020.
6. ಶ್ರೀಮತಿ ಶಿವಮ್ಮ, ಹಿಂದಿನ ಅಧ್ಯಕ್ಷರು, ಹೆಚ್. ಬಸವಪುರ ಗ್ರಾಮ ಪಂಚಾಯಿತಿ, ಮಳವಳ್ಳಿ ತಾಲ್ಲೂಕು, ಮಂಡ್ಯ ಜಿಲ್ಲೆ, ಇವರ ಲಿಖಿತ ಸಮಜಾಯಿಷಿ ದಿನಾಂಕ:12.06.2020.
7. ಸರ್ಕಾರದ ವಿಚಾರಣಾ ನೋಟೀಸು ಸಂಖ್ಯೆ: ಗ್ರಾಅಪ398ಗ್ರಾಪಂಅ 2020, ದಿನಾಂಕ:12.01.2021.

***

ಶ್ರೀಮತಿ ಶಿವಮ್ಮ, ಹಿಂದಿನ ಅಧ್ಯಕ್ಷರು, ಹೆಚ್. ಬಸವಪುರಗ್ರಾಮ ಪಂಚಾಯಿತಿ, ಮಳವಳ್ಳಿ ತಾಲ್ಲೂಕು, ಮಂಡ್ಯಜಿಲ್ಲೆ(ಇನ್ನು ಮುಂದೆ ಎದುರುದಾರರು ಎಂದು ಕರೆಯಲ್ಪಡುತ್ತಾರೆ)ಇವರು ತಮ್ಮ ಅಧಿಕಾರಾವಧಿಯಲ್ಲಿ ಈ ಕೆಳಕಂಡ ಆರೋಪಗಳನ್ನು ಎಸಗಿರುವುದಾಗಿ, ಮುಖ್ಯಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಮೈಸೂರು ಜಿಲ್ಲೆ ರವರು ಮೇಲೆ ಓದಲಾದ ಕ್ರಮಾಂಕ (1)ರಲ್ಲಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

**ದೋಷಾರೋಪಣೆ:-**

*ಶ್ರೀಮತಿ ಶಿವಮ್ಮ ಕೋಂ ಮಹದೇವಸ್ವಾಮಿ.ಕೆ, ಹಿಂದಿನ ಅಧ್ಯಕ್ಷರು, ಹೆಚ್. ಬಸವಪುರಗ್ರಾಮ ಪಂಚಾಯಿತಿ, ಮಳವಳ್ಳಿ ತಾಲ್ಲೂಕು, ಮಂಡ್ಯ ಜಿಲ್ಲೆ ಇವರು ದಿನಾಂಕ:25.01.2018 ರಂದು ಗ್ರಾಮ ಪಂಚಾಯಿತಿಯ ಅಧ್ಯಕ್ಷರ ಹುದ್ದೆಗೆ ರಾಜೀನಾಮೆ ನೀಡಿದ್ದು, ಸದರಿ ರಾಜೀನಾಮೆಯನ್ನು ದಿನಾಂಕ:05.02.2018 ರಂದು ಉಪವಿಭಾಗಾಧಿಕಾರಿಗಳು ಅಂಗೀಕರಿಸಿದ್ದು, ರಾಜೀನಾಮೆ ಅಂಗೀಕಾರವಾದ ನಂತರವು ಮಹಾತ್ಮಾ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತ್ರಿಯಡಿ ಯೋಜನೆಯಲ್ಲಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯವರ ಎಫ್.ಟಿ.ಓ. ಮೂಲಕ ಹಣ ಪಾವತಿ ಮಾಡುವ ಆದೇಶಕ್ಕೆ ಆಪಾದಿತ ಅಧ್ಯಕ್ಷರಾದ ಶ್ರೀಮತಿ ಶಿವಮ್ಮ ರವರ ಲಾಗಿನ್‌ನಿಂದ ಬಯೊಮೆಟ್ರಿಕ್ ಬಳಸಿ ಅನುಮೋದನೆ ನೀಡಿ ರೂ.7,63,907/-ಗಳನ್ನು ಪಾವತಿ ಮಾಡಲು ಕ್ರಮವಹಿಸಿರುವುದು ಎಂ.ಐ.ಎಸ್ ದಾಖಲೆಗಳಿಂದ ಕಂಡು ಬಂದಿರುತ್ತದೆ.*

ಕರ್ನಾಟಕಗ್ರಾಮ ಸ್ವರಾಜ್ ಮತ್ತು ಪಂಚಾಯತ್‌ರಾಜ್‌ಅಧಿನಿಯಮ 1993 ರ 43(ಎ), 48(4) ಮತ್ತು 48(5) ರಡಿಗ್ರಾಮ ಪಂಚಾಯಿತಿ ಅಧ್ಯಕ್ಷರು, ಉಪಾಧ್ಯಕ್ಷರುಗಳು ಹಾಗೂ ಸದಸ್ಯರುಗಳ ಮೇಲಿನ ಆರೋಪಗಳಿಗೆ ವಿಚಾರಣೆ ನಡೆಸಲು ಮೇಲೆ ಕ್ರಮಾಂಕ (2)ರಲ್ಲಿ ಪ್ರಾದೇಶಿಕ ಆಯುಕ್ತರುಗಳಿಗೆ ಅಧಿಕಾರ ಪ್ರತ್ಯಾಯೋಜಿಸಲಾಗಿದ್ದು, ಅದರನ್ವಯ ಸದರಿ ಪ್ರಕರಣದ ವಿಚಾರಣೆ ನಡೆಸಿ, ಸರ್ಕಾರಕ್ಕೆ ಸಲ್ಲಿಸುವಂತೆ ಮೇಲೆ ಓದಲಾದ ಕ್ರಮಾಂಕ(3)ರ ಪತ್ರದಲ್ಲಿ ಈ ಪ್ರಕರಣವನ್ನು ಪ್ರಾದೇಶಿಕ ಆಯುಕ್ತರು, ಮೈಸೂರು ವಿಭಾಗ, ಮೈಸೂರು ರವರಿಗೆ ವಹಿಸಲಾಗಿತ್ತು.

ಅದರಂತೆ, ಪ್ರಾದೇಶಿಕ ಆಯುಕ್ತರು, ಮೈಸೂರು ವಿಭಾಗ, ಮೈಸೂರು ಇವರು ಈ ಪ್ರಕರಣದ ವಿಚಾರಣೆ ನಡೆಸಿ, ಎದುರುದಾರರಾದ ಶ್ರೀಮತಿ ಶಿವಮ್ಮ ಹಿಂದಿನ ಅಧ್ಯಕ್ಷರು, ಇವರುತಮ್ಮಅಧಿಕಾರಾವಧಿಯಲ್ಲಿ ಅಧಿಕಾರ ದುರುಪಯೋಗಪಡಿಸಿಕೊಂಡಿರುವುದು ಸಾಬೀತಾಗಿದ್ದು, ಸದರಿಯವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್‌ರಾಜ್‌ಅಧಿನಿಯಮ 1993 ರ ಪ್ರಕರಣ 48(4) ರನ್ವಯ ಕ್ರಮಜರುಗಿಸಬಹುದಾಗಿ, ಅಭಿಪ್ರಾಯಪಟ್ಟು ಮೇಲೆ ಓದಲಾದ ಕ್ರಮಾಂಕ (4)ರಲ್ಲಿ ಸರ್ಕಾರಕ್ಕೆ ವರದಿಯನ್ನು ಸಲ್ಲಿಸಿರುತ್ತಾರೆ.

ಪ್ರಾದೇಶಿಕ ಆಯುಕ್ತರ ಅಭಿಪ್ರಾಯದನ್ವಯ ಕ್ರಮವಹಿಸುವ ಪೂರ್ವದಲ್ಲಿ ಎದುರುದಾರರಾದ ಶ್ರೀಮತಿ ಶಿವಮ್ಮ, ಹಿಂದಿನ ಅಧ್ಯಕ್ಷರು, ಇವರಿಗೆ ಮೇಲೆ ಓದಲಾದ ಕ್ರಮಾಂಕ (5)ರಲ್ಲಿ ಎರಡನೇ ಕಾರಣ ಕೇಳುವ ನೋಟೀಸ್ ಜಾರಿ ಮಾಡಲಾಗಿದ್ದು, ಮೇಲೆ ಓದಲಾದಕ್ರಮಾಂಕ(6) ರಲ್ಲಿ ಕೆಳಕಂಡಂತೆ ಲಿಖಿತ ಸಮಜಾಯಿಷಿಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

*ಸದರಿ ಹಣ ಕೇವಲ ನನ್ನೊಬ್ಬಳ ಬಯೋಮೆಟ್ರಿಕ್ ಸಹಿಯಿಂದ ಬಿಡುಗಡೆಯಾಗಲಿಲ್ಲ. ಇದಕ್ಕೆ ಸಂಬಂಧಪಟ್ಟ ಇಲಾಖಾಧಿಕಾರಿಗಳು ಸಹಿ ಮಾಡಿ, ಆಗಿರುವ ಕಾಮಗಾರಿಗಳನ್ನು ಪರಿಶೀಲಿಸಿ, ಸರಿಯೆನ್ನಿಸಿದ ಮೇಲೆ ಉದ್ಯೋಗಖಾತ್ರಿ ಫಲಾನುಭವಿಗಳಿಗೆ ಮಳವಳ್ಳಿ ತಾಲ್ಲೂಕು ಪಂಚಾಯಿತಿ ಅಭಿಯಂತರರು ಹಾಗೂ ಹೆಚ್. ಬಸವಪುರಗ್ರಾಮ ಪಂಚಾಯಿತಿಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯವರು ಬಯೋಮೆಟ್ರಿಕ್ ಸಹಿಯಾದ ನಂತರ ಕೊನೆಯದಾಗಿ ತನ್ನ ಲಾಗಿನ್‌ನಿಂದ ಬಯೋಮೆಟ್ರಿಕ್ ಬಳಸಿ ಅನುಮೋದನೆ ನೀಡಿರುವುದಾಗಿ ತಿಳಿಸಿರುತ್ತಾರೆ. ನನಗೆ ಅನುಭವದಕೊರತೆ ಹಾಗೂ ಇದರ ಬಗ್ಗೆ ತಿಳುವಳಿಕೆ ಕೊರತೆಯಿಂದಾಗಿ ಮಹಾತ್ಮಗಾಂಧಿ ರಾಷ್ಟ್ರೀಯ ಉದ್ಯೋಗಖಾತ್ರಿ ಯೋಜನೆಯಡಿ ನನ್ನ ಲಾಗಿನ್‌ನಿಂದ ಬಯೋಮೆಟ್ರಿಕ್ ಬಳಸಿ ಕೂಲಿ ಹಣಕೂಲಿಗಾರರಿಗೆ ಪಾವತಿ ಮಾಡಿರುತ್ತೇನೆ ಹೊರತಾಗಿ ಯಾವುದೇ ಹಣಕಾಸಿನ ಅವ್ಯವಹಾರ ನಡೆಸಿರುವುದಿಲ್ಲ ಎಂಬುದಾಗಿ ತಿಳಿಸಿರುತ್ತಾರೆ.*

ಎದುರುದಾರರಿಗೆ ಅಹವಾಲು ಹೇಳಿಕೊಳ್ಳಲು ಅವಕಾಶವನ್ನು ನೀಡಲು ನಿರ್ಣಯಿಸಿ, ಮೇಲೆ ಓದಲಾದಕ್ರಮಾಂಕ(7) ರಲ್ಲಿ ವಿಚಾರಣಾ ನೋಟಿಸ್ಸನ್ನುಜಾರಿ ಮಾಡಿ ಪ್ರಕರಣವನ್ನು ದಿನಾಂಕ:21.01.2021

ರಂದು ಪ್ರಧಾನ ಕಾರ್ಯದರ್ಶಿಯವರ ಅರೆನ್ಯಾಯಿಕ ನ್ಯಾಯಾಲಯದಲ್ಲಿ ವಿಚಾರಣೆಗೆ ಒಳಪಡಿಸಲಾಗಿದ್ದು,ಎದುರುದಾರರು ಹಾಜರಾಗಿರುತ್ತಾರೆ. ಅಲ್ಲದೇ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯವರು ಹಾಜರಾಗಿ ಹೇಳಿಕೆಯನ್ನು ಸಲ್ಲಿಸಿದ್ದು, ಎದುರುದಾರರ ರಾಜಿನಾಮೆಯು ದಿನಾಂಕ:05.02.2018 ರಂದು ಅಂಗೀಕಾರವಾಗಿದ್ದು ನಂತರದ ಅವಧಿಯಲ್ಲಿ ದಿನಾಂಕ:06.02.2018 ಹಾಗೂ ದಿನಾಂಕ:01.03.2018 ರಂದು ಎಂ.ಜಿ.ಎನ್.ಆರ್.ಇ.ಜಿ.ಎ ಯೋಜನೆಯಡಿ ಎಫ್.ಟಿ.ಓ ಮುಖಾಂತರ ರೂ.7,63,907/- ಗಳ ಹಣ ಪಾವತಿ ಮಾಡಿರುವುದಾಗಿ ತಿಳಿಸಿರುತ್ತಾರೆ.ಎದುರುದಾರರಿಗೆ ಅಹವಾಲು ಹೇಳಿಕೊಳ್ಳಲು ಸಾಕಷ್ಟು ಅವಕಾಶವನ್ನು ನೀಡಲಾಗಿದೆ.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಮೈಸೂರು ಜಿಲ್ಲೆ ಇವರು ಸಲ್ಲಿಸಿರುವ ದಾಖಲೆಗಳು, ಪ್ರಾದೇಶಿಕ ಆಯುಕ್ತರು, ಮೈಸೂರು ವಿಭಾಗ, ಮೈಸೂರು ಇವರ ವರದಿಯನ್ನು ಹಾಗೂ ಎದುರುದಾರರ ಲಿಖಿತ ಹೇಳಿಕೆ ಹಾಗೂ ಮೌಖಿಕ ಹೇಳಿಕೆಯನ್ನು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್‌ರಾಜ್ ಅಧಿನಿಯಮ 1993 ಅಧಿನಿಯಮ ಪ್ರಕರಣ 43(ಎ) ಹಾಗೂ 48(4) ರಡಿ ಪರಿಶೀಲಿಸಿದಾಗ, ಎದುರುದಾರರು ತಮ್ಮ ಅಧಿಕಾರಾವಧಿಯಲ್ಲಿ ಅಧಿಕಾರ ದುರುಪಯೋಗಪಡಿಸಿಕೊಂಡಿರುವುದು ಸಾಬೀತಾಗಿರುವುದರಿಂದ ಸದರಿಯವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್‌ರಾಜ್(ತಿದ್ದುಪಡಿ) ಅಧಿನಿಯಮ 2020 ರಪ್ರಕರಣ43(ಎ)(vi) ರಡಿ ಮಂಡ್ಯ ಜಿಲ್ಲೆ, ಮಳವಳ್ಳಿ ತಾಲ್ಲೂಕು, ಹೆಚ್.ಬಸವಪುರ ಪಂಚಾಯಿತಿಯ ಅಧ್ಯಕ್ಷ ಹಾಗೂ ಸದಸ್ಯತ್ವ ಸ್ಥಾನದಿಂದ ತೆಗೆದುಹಾಕಲು ನಿರ್ಧರಿಸಿದೆ.

ಅದರಂತೆ ಈ ಕೆಳಕಂಡ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 398 ಗ್ರಾಪಂಅ 2020, ಬೆಂಗಳೂರು, ದಿನಾಂಕ:23.04.2021.</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಶ್ರೀಮತಿ ಶಿವಮ್ಮ, ಹಿಂದಿನ ಅಧ್ಯಕ್ಷರು, ಹೆಚ್.ಬಸವಪುರ ಗ್ರಾಮ ಪಂಚಾಯಿತಿ, ಮಳವಳ್ಳಿ ತಾಲ್ಲೂಕು, ಮಂಡ್ಯ ಜಿಲ್ಲೆ ಇವರ ವಿರುದ್ಧದ ಅಧಿಕಾರ ದುರುಪಯೋಗಪಡಿಸಿಕೊಂಡಿರುವ ಆರೋಪವು ಸಾಬೀತಾಗಿದ್ದು, ಸದರಿಯವರು ಪ್ರಸ್ತುತ ಗ್ರಾಮ ಪಂಚಾಯಿತಿಯ ಸದಸ್ಯರಲ್ಲದ ಕಾರಣ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್‌ರಾಜ್(ತಿದ್ದುಪಡಿ) ಅಧಿನಿಯಮ-1993ರ ಪ್ರಕರಣ 43(ಎ)(vi) ರಡಿ ಇವರನ್ನು ಸದರಿ ಅಧಿನಿಯಮದ 12(ಎಲ್) ರನ್ವಯ ಆರು ವರ್ಷಗಳ ಕಾಲ ಚುನಾವಣೆಗೆ ನಿಲ್ಲದಂತೆ ಅನರ್ಹಗೊಳಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತುಅವರ ಹೆಸರಿನಲ್ಲಿ,

B. Naveenkumar 23/04/21.
(ನವೀನ್‌ಕುಮಾರ್ ಬಿ.)
ಸರ್ಕಾರದಅಧೀನ ಕಾರ್ಯದರ್ಶಿ(ಪ್ರ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್‌ಇಲಾಖೆ. (ಜಿ.ಪಂ)

23/04/21

**ಗೆ:**

1) ಪ್ರಾದೇಶಿಕ ಆಯುಕ್ತರು, ಮೈಸೂರು ವಿಭಾಗ, ಮೈಸೂರು.
2) ಆಯುಕ್ತರು, ಪಂಚಾಯತ್‌ರಾಜ್‌ಆಯುಕ್ತಾಲಯ, ಕೆ.ಜಿರಸ್ತೆ, ಬೆಂಗಳೂರು.-09

...4

3) ಮುಖ್ಯಕಾರ್ಯನಿರ್ವಾಹಕಾಧಿಕಾರಿ, ಜಿಲ್ಲಾ ಪಂಚಾಯಿತಿ, ಮಂಡ್ಯಜಿಲ್ಲೆ.
4) ಕಾರ್ಯನಿರ್ವಾಹಕಾಧಿಕಾರಿ, ತಾಲ್ಲೂಕು ಪಂಚಾಯಿತಿಮಳವಳ್ಳಿ, ಮಂಡ್ಯಜಿಲ್ಲೆ.
5) ಶ್ರೀಮತಿ ಶಿವಮ್ಮ, ಹಿಂದಿನ ಅಧ್ಯಕ್ಷರು, ಹೆಚ್. ಬಸವಪುರಗ್ರಾಮ ಪಂಚಾಯಿತಿ, ಮಳವಳ್ಳಿ ತಾಲ್ಲೂಕು, ಮಂಡ್ಯಜಿಲ್ಲೆ.
6) ಗಣಕ ಕೋಶ–ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
7) ಕಛೇರಿ ಪ್ರತಿ/ಹೆಚ್ಚುವರಿ ಪ್ರತಿ.

<u>ಪ್ರತಿಯನ್ನು ಮಾಹಿತಿಗಾಗಿ:</u>

1) ಮಾನ್ಯಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರ ಆಪ್ತಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2) ಸರ್ಕಾರದ ಕಾರ್ಯದರ್ಶಿಗಳು (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆ ರವರ ಆಪ್ತಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3) ನಿರ್ದೇಶಕರು(ಪಂ.ರಾಜ್–1), ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಸಹಾಯಕರು.